# ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು : ಶ್ರೀ ಎಂ.ಎ. ಗೋಪಾಲಸ್ವಾಮಿ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 905

ಉತ್ತರಿಸಬೇಕಾದ ದಿನಾಂಕ : 21.12.2021

ಉತ್ತರಿಸಬೇಕಾದ ಸಚಿವರು : ಸಹಕಾರ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಹಾಸನ ಸಹಕಾರಿ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿಯಮಿತದ ವ್ಯಾಪ್ತಿಯಲ್ಲಿರುವ ಚನ್ನರಾಯಪಟ್ಟಣ ತಾಲ್ಲೂಕಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಹಾಲು ಉತ್ಪಾದಕರ ಸಹಕಾರ ಸಂಘಗಳೆಷ್ಟು; (ಸಂಘದ ವಿವರಗಳನ್ನು ಗ್ರಾಮವಾರು ನೀಡುವುದು) ಈ ಸಂಘಗಳಲ್ಲಿರುವ ಸದಸ್ಯರ ಸಂಖ್ಯೆ ಎಷ್ಟು; (ಸದಸ್ಯರ ವಿವರ ನೀಡುವುದು) | ಹಾಸನ ಸಹಕಾರಿ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿಯಮಿತದ ವ್ಯಾಪ್ತಿಯಲ್ಲಿರುವ ಚನ್ನರಾಯಪಟ್ಟಣ ತಾಲ್ಲೂಕಿನಲ್ಲಿ ಒಟ್ಟು 318 ಹಾಲು ಉತ್ಪಾದಕರ ಸಹಕಾರ ಸಂಘಗಳು ಕಾರ್ಯನಿರ್ವಹಿಸುತ್ತಿರುತ್ತವೆ. ಹಾಗೂ ಈ ಸಹಕಾರ ಸಂಘಗಳಲ್ಲಿ ಒಟ್ಟು 43076 ಸದಸ್ಯರು ಇರುತ್ತಾರೆ. ವಿವರಗಳನ್ನು **ಅನುಬಂಧದಲ್ಲಿ** ನೀಡಲಾಗಿದೆ. |
| ಆ) | ಈ ಸಂಘಗಳು ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿವೆಯೇ ಅಥವಾ ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿವೆಯೇ, ಬಾಡಿಗೆ ಕಟ್ಟಡಗಳಲ್ಲಿದ್ದರೆ ಅದಕ್ಕೆ ಪಾವತಿಸುತ್ತಿರುವ ಬಾಡಿಗೆ ಎಷ್ಟು? (ಸಂಘವಾರು ಮಾಹಿತಿ ನೀಡುವುದು) | ಮೇಲ್ಕಂಡ ಸಹಕಾರ ಸಂಘಗಳ ಪೈಕಿ 128 ಸಹಕಾರ ಸಂಘಗಳು ಸ್ವಂತ ಕಟ್ಟಡದಲ್ಲಿ, 184 ಸಹಕಾರ ಸಂಘಗಳು ಬಾಡಿಗೆ ಕಟ್ಟಡದಲ್ಲಿ ಹಾಗೂ 06 ಸಹಕಾರ ಸಂಘಗಳು ಗ್ರಾಮ ಪಂಚಾಯಿತಿ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುತ್ತವೆ. ವಿವರಗಳನ್ನು **ಅನುಬಂಧದಲ್ಲಿ** ನೀಡಲಾಗಿದೆ. |
| ಇ) | ಚನ್ನರಾಯಪಟ್ಟಣ ತಾಲ್ಲೂಕಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಹಾಲು ಉತ್ಪಾದಕರ ಸಹಕಾರ ಸಂಘಗಳ ಚುನಾವಣೆಗಳನ್ನು ನಿಯಮಿತವಾಗಿ ನಡೆಸಲಾಗುತ್ತಿದೆಯೇ ಕೆಲವು ಸಂಘಗಳಲ್ಲಿ ಸದಸ್ಯರಿಗೆ ಮಾಹಿತಿ ನೀಡದೇ ಚುನಾವಣೆಗಳನ್ನು ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಬಂದಿದ್ದಲ್ಲಿ ಇಂತಹ ಎಷ್ಟು ಪ್ರಕರಣಗಳು ಬೆಳಕಿಗೆ ಬಂದಿವೆ ಇಂತಹ ಪ್ರಕರಣಗಳಲ್ಲಿ ಭಾಗಿಯಾಗಿರುವವರ ವಿರುದ್ಧ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ? (ಪ್ರಕರಣವಾರು ಮಾಹಿತಿ ನೀಡುವುದು) | ಚನ್ನರಾಯಪಟ್ಟಣ ತಾಲ್ಲೂಕಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಹಾಲು ಉತ್ಪಾದಕರ ಸಹಕಾರ ಸಂಘಗಳಲ್ಲಿ ಸದಸ್ಯರಿಗೆ ಮಾಹಿತಿ ನೀಡದೇ ಚುನಾವಣೆ ನಡೆಸುತ್ತಿರುವ ಬಗ್ಗೆ ಇಲಾಖೆಗೆ ಯಾವುದೇ ದೂರು ಅರ್ಜಿಗಳು ಸ್ವೀಕೃತವಾಗಿರುವುದಿಲ್ಲ.<br><br>ಅನ್ವಯಿಸುವುದಿಲ್ಲ. |

ಸಂಖ್ಯೆ: ಸಿಒ 221 ಸಿಸಿಬಿ 2021

(ಎಸ್.ಟಿ. ಸೋಮಶೇಖರ್)

ಸಹಕಾರ ಸಚಿವರು